# JAIN COLLEGE

463/465, 18th Main Road, SS Royal, 80 Feet Road, Rajarajeshwari Nagar,
Bangalore - 560 098

ದಿನಾಂಕ: /೧೨/೨೦೦೭ ವಿಷಯ: **ಕನ್ನಡ**

**ದ್ವಿತೀಯ ಪಿ.ಯು.ಸಿ.**

**ಅವಧಿ – ೩.೦೦ ಗಂಟೆಗಳು** **ಗರಿಷ್ಠ ಅಂಕಗಳು – ೧೦೦**

## ಅ–ವಿಭಾಗ

**I. ಎಲ್ಲಾ ಪ್ರಶ್ನೆಗಳಿಗೂ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ. 1x10=10**

೧. ವಿಭೀಷಣ ಯಾರು?

೨. ಯಾವುದಕ್ಕೆ ಸೆಳೆವಿದೆಯೆಂದು ಕವಿ ಬೇಂದ್ರೆಯವರು ಹೇಳಿದ್ದಾರೆ?

೩. ಜೀಸಸ್‌ನ ಮುಖಮುದ್ರೆ ಏನನ್ನು ನುಡಿಯುವಂತಿದೆ?

೪. ಹತ್ತಿಯ ಬೀಜಕ್ಕೆ ಯಾವುದು ತಪ್ಪದ ಕರ್ಮ?

೫. ಕನ್ನಡದ ಸಮಸ್ಯೆಗಳಿಗೆ ಪರಿಹಾರ ದೊರಕಿಸಲು ನಾವು ಏನು ಮಾಡಬೇಕು?

೬. ಕಲಾಂ ಅವರ ಕ್ರಿಯಾಶೀಲತೆಗೆ ಸಾಕ್ಷಿ ಯಾವುದು?

೭. ಅದೃಷ್ಟದ ಪ್ರಶ್ನೆ ಬಂದಾಗ ಲೇಖಕಿಗೆ ಯಾರು ನೆನಪಾಗುತ್ತಾರೆ?

೮. ಆನೆ ಇಲ್ಲದ್ದರಿಂದ ವೇಲಾಯುಧ ಎಲ್ಲಿ ಕೆಲಸಕ್ಕೆ ಸೇರಿದನು?

೯. ನಿರೂಪಕರ ಪ್ರಕಾರ ಮುನ್ಸಿಪಾಲಿಟಿ ಪ್ರೆಸಿಡೆಂಟರ ಕರ್ತವ್ಯವೇನು?

೧೦. ಪೊಲೀಸರು ಏನೆಂದು ಮಹಜರು ಬರೆದುಕೊಂಡರು?

## ಆ–ವಿಭಾಗ

**II. ಅ. ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x4=8**

೧೧. ತಾನು ಘೋರತರ ವಿಷ ಕುಡಿಯುವುದಾಗಿ ದ್ರೌಪದಿ ಏಕೆ ಹೇಳುತ್ತಾಳೆ?

೧೨. ಯಾರಿಂದ ಯಾವುದನ್ನು ಹೇಗೆ ಕಲಿಯಬೇಕೆಂದು ಸೋಮನಾಥನು ಹೇಳಿದ್ದಾನೆ?

೧೩. ದನಗಳಿಗೆ ಜನಗಳಿಗೆ ಏನೇನು ಇಲ್ಲ?

೧೪. ಮಾಗುವ ಜೀವದ ಪಯಣ ಹೇಗೆ ಸಾಗುತ್ತಿದೆ?

೧೫. ಕವಯಿತ್ರಿ ಮುಗಿಲತ್ತ ಕೈಚಾಚಿ ಏಕೆ ನಿಂತಿದ್ದಾರೆ?

**ಆ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x3=6**

೧೬. ಬ್ರಿಟೀಷರು ಬರುವ ಮೊದಲು ವಾಲ್‌ಪರ್ಸ್ಯೆ ಹೇಗಿತ್ತು?

೧೭. ಕನ್ನಡದ ಬಗ್ಗೆ ಮಾತಾಡಲು ನಾವು ಯೋಗ್ಯತೆ ಗಳಿಸುವುದು ಯಾವಾಗ?

೧೮. ಕಲಾಂ ಅವರು ತಾವು ಆತ್ಮಕಥೆ ಬರೆದುದು ಏತಕ್ಕಾಗಿ?

೧೯. ಮುದ್ದಣನನ್ನು ಮನೋರಮೆ ಹೇಗೆ ಉಪಚರಿಸಿದಳು?

**ಇ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x3=6**

೨೦. ಆನೆ ಸಾಕುವುದರ ಬಗ್ಗೆ ಜನರ ನಂಬಿಕೆ ಏನಾಗಿತ್ತು?

೨೧. ಡ್ರೈವರ್‌ನ ತಲೆ ಜಜ್ಜಿ ಹೋದದ್ದು ಹೇಗೆ? ಆನೆ ಅದಕ್ಕೆ ಕಾರಣವೇ?

೨೨. ತನ್ನ ಕೆಲಸ ಅತ್ಯಂತ ಅಪಾಯಕಾರಿಯೆಂದು ದುರ್ಗಪ್ಪ ವಿವರಿಸಿದ್ದು ಹೇಗೆ?

೨೩. ಅರಣ್ಯ ಇಲಾಖೆಯವರು ನಾಗರಾಜನನ್ನು ಕುರಿತು ಏನೆಂದು ಜಾಹಿರಾತು ನೀಡಿದರು?

## ಇ–ವಿಭಾಗ

**III. ಅ. ಯಾವುದಾದರೂ ಎರಡು ವಾಕ್ಯಗಳ ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 3x2=6**

೨೪. ಅರ್ಥರೇಖೆಯಿದ್ದಲ್ಲಿ ಫಲವೇನು, ಆಯುಷ್ಯರೇಖೆ ಇಲ್ಲದನ್ನಕ್ಕ

೨೫. ಬೆಣ್ಣೆಯಾಗುವ ಕರ್ಮ ತಪ್ಪಿದ್ದಲ್ಲ.

೨೬. ಬಿಡುಗಡೆಗೆ ಹಾತೊರೆದು ರೈಟನ್ನೇ ರಾಂಗೆಂದಳೋ.

**ಆ. ಯಾವುದಾದರೂ ಒಂದು ವಾಕ್ಯ ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 3x1=3**

೨೭. ಅದೃಷ್ಟವನ್ನೇ ಅವಲಂಬಿಸಿ ಬದುಕಲು ಸಾಧ್ಯವೇ?

೨೮. ವ್ಯಕ್ತಿಗಿಂತ ರಾಷ್ಟ್ರ ದೊಡ್ಡದು

**ಇ. ಯಾವುದಾದರೂ ಒಂದು ವಾಕ್ಯ ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 3x1=3**

೨೯. ವೆಪನ್ ಸಾರ್,ವೆಪನ್ ನನಗೆ ಮುಖ್ಯ

೩೦. ಈ ಕಂಬದೊಳ್ಗೆ ಏನೋ ಸೇರ್ಕೊಂಡಿದೆ

## ಈ–ವಿಭಾಗ

**IV. ಅ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿರಿ. 4x3=12**

೩೧. ರಾವಣನು ಬಹುರೂಪಿ ವಿದ್ಯೆಯನ್ನು ಒಲಿಸಿಕೊಂಡ ಸಂಧರ್ಭವನ್ನು ವಿವರವಾಗಿ ಬರೆಯಿರಿ?

೩೨. ತನಗೊದಗಿದ ಸಂಕಟವನ್ನು ಹೇಳಿಕೊಳ್ಳುವ ದ್ರೌಪದಿಯ ಸ್ವಗತ ನುಡಿಗಳಾವುವು?

೩೩. 'ಬೆಳಗು ಜಾವ' ಕವನದ ಮೂಲಕ ಕವಿ ಬೇಂದ್ರೆ ಹೇಳಿರುವ ವಿಚಾರಗಳಾವುವು?

೩೪. 'ಶಿಲುಬೆ ಏರಿದ್ದಾನೆ' ಕವನದಲ್ಲಿ ಜೀಸಸ್ ವ್ಯಕ್ತಿತ್ವ ಮತ್ತು ಆತನ ಮಹತ್ವವನ್ನು ಕವಿ ಯಾವ ರೀತಿ ನಿರೂಪಿಸಿದ್ದಾರೆ?ವಿವರಿಸಿ

**ಆ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 4x2=8**

೩೫. ಹೊರನಾಡಿನಿಂದ ಬಂದು ಕನ್ನಡ ನಾಡಿನಲ್ಲಿ ನೆಲೆಸಿರುವವರ ಜವಾಬ್ದಾರಿಗಳನ್ನು ಲೇಖಕರು ಹೇಗೆ ವಿವರಿಸಿದ್ದಾರೆ?

೩೬. ಧಣಿ ಹಾಗೂ ಹೊಳೆಯ ನಡುವಿನ ನಡುವಿನ ಸಮರವನ್ನು ಚಿತ್ರಿಸಿ:

೩೭. ತಮ್ಮನ್ನು ಭೇಟಿಯಾದ ಮಕ್ಕಳಿಗೆ ಕಲಾಂ ಹೇಳಿದ್ದೇನು?

**ಇ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 4x2=8**

೩೮. ಅರಣ್ಯ ಇಲಾಖೆ ಶತ್ರುಗಳ ಕಾರ್ಯಭಾರವನ್ನು ನಾಗರಾಜ ವಿವರಿಸಿದ್ದು ಹೇಗೆ?

೩೯. ಪುಟ್ಟಯ್ಯ ತನ್ನ ಅಸಹಾತಕತೆಯನ್ನು ಹೇಗೆ ವಿವರಿಸುತ್ತಾನೆ?

೪೦. ನಾಗರಾಜನ ನಿಗೂಢ ಸಾವಿನ ಬಗ್ಗೆ ಜನರ ಅಭಿಪ್ರಾಯಗಳೇನು?

## ಉ–ವಿಭಾಗ

**ಗಿ. ಅ. ಯಾವುದಾದರೂ ಒಂದು ಪದ್ಯದ ಭಾವಾರ್ಥ ಬರೆಯಿರಿ. 5x1=5**

೪೧. ಕದಡಿದ ಸಲಿಲಂ ತಿಳಿವಂ
ದದೆ ತನ್ನಿಂ ತಾನೆ ತಿಳಿದ ದಶವದನಂಗಾ
ದುದು ವೈರಾಗ್ಯಂ ಸೀತೆಯೊ

ಘುದಾತ್ತನೊಳ್ ಪುಟ್ಟದಲ್ತೆ ವೀಲಿರಾಗಂ

ಅಥವಾ

೪೨. ಎಲ್ಲರೊಳು ಕಲಿಭೀಮನೇ ಮಿಡು
ಕುಳ್ಳ ಗಂಡನು ಹಾನಿ ಹರಿಬಕೆ
ನಿಲ್ಲದಂಗೈಸುವನು ಕಡು ಹೀಹಾಳಿಯುಳ್ಳವನು
ಖುಲ್ಲನಿವನುಪಟಳವನಾತಂ
ಗೆಳ್ಳವನು ಹೇಳುವೆನು ಬಳಿಕವ
ನಲ್ಲಿ ಹುರುಳಿಲ್ಲದೊಡೆ ಕುಡಿವೆನು ಘೋರತರ ವಿಷವ

## ಭಾಷಾಭ್ಯಾಸ

**ಅ. ಈ ಕೆಳಗಿನ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ. 2x6=12**

೪೩. ಈ ಪದಗಳಿಗೆ ಅರ್ಥ ಬರೆಯಿರಿ.
ತಮ, ಮಾಸ

೪೪. ಈ ಪದಗಳಿಗೆ ನಾನಾರ್ಥ ಬರೆಯಿರಿ.
ಬಗೆ, ಅಡಿ

೪೫. ಈ ಪದಗಳಲ್ಲಿರುವ ಗುಣವಾಚಕಗಳನ್ನು ಗುರುತಿಸಿ
ಹಿತವಚನ, ಕಲಿಭೀಮ

೪೬. ಈ ಕೆಳಗಿನ ಕ್ರಿಯಾಪದಗಳಲ್ಲಿ ಧಾತು ಗುರುತಿಸಿ
ಓದುವನು, ಬಂದಳು

೪೭. ಇವುಗಳನ್ನು ನಿಷೇಧ ರೂಪದಲ್ಲಿ ಬರೆಯಿರಿ
ಹಾಡುವನು, ಬರುವುದು

೪೮. ವಿಭಕ್ತಿ ಪ್ರತ್ಯಯಗಳನ್ನು ಗುರುತಿಸಿ.
ರಾಮನಂ, ಅವನೊಳ್

೪೯. ಈ ಪದಗಳಿಗೆ ತದ್ಭವ ರೂಪ ಬರೆಯಿರಿ
ವೀರ, ಕಸ್ತೂರಿ

**ಆ. ಯಾವುದಾದರೂ ಒಂದನ್ನು ಕುರಿತು ಪ್ರಬಂಧ ಬರೆಯಿರಿ. 5x1=5**

೫೦. ರಕ್ತದಾನ ಮತ್ತು ನೇತ್ರದಾನಗಳ ಮಹತ್ವ

೫೧. ಮಾತೃ ಭಾಷೆಯಲ್ಲಿ ಶಿಕ್ಷಣ

**ಇ. ಪತ್ರಲೇಖನ : ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ. 4x1=4**

೫೨. ನಿಮ್ಮ ಭವಿಷ್ಯದ ಬಗೆಗಿನ ಕನಸನ್ನು ಕುರಿತು ನಿಮ್ಮ ಗೆಳೆಯ/ಗೆಳತಿಗೆ ಪತ್ರ ಬರೆಯಿರಿ.

೫೩. ವರ್ಗಾವಣೆ ಪತ್ರ ಕೋರಿ ಪ್ರಾಂಶುಪಾಲರಿಗೆ ಪತ್ರ ಬರೆಯಿರಿ:

**ಈ. ಈ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ. 4x1=4**

೫೪. ಹಣಕ್ಕಿಂತ ಗುಣ ಮುಖ್ಯ.

೫೫. ಉತ್ಸಾಹವೇ ಯೌವ್ವನ, ಚಿಂತೆಯೇ ಮುಪ್ಪು.

*********************************